# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **65** |
| **ಸದಸ್ಯರ ಹೆಸರು** | : | **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನ ಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | : | **09.12.2024** |
| **ಉತ್ತರಿಸುವ ಸಚಿವರು** | : | **ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು** |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು ಶಿಕ್ಷಣ ಇಲಾಖೆ ಕಛೇರಿಯ ಕಟ್ಟಡ ಶಿಥಿಲವಾಗಿದ್ದು, ಮಳೆಗಾಲದಲ್ಲಿ ಸೋರುತ್ತಿರುವುದರಿಂದ ಕಛೇರಿಯ ನಿರ್ವಹಣೆ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಹೌದು. |
| ಆ) | ಬಂದಿದ್ದಲ್ಲಿ, ಸದರಿ ಕಛೇರಿಯ ಕಟ್ಟಡದ ದುರಸ್ತಿ ಮಾಡುವುದು ಹಾಗೂ ಸುಸಜ್ಜಿತ ಹೊಸ ಕಟ್ಟಡ ನಿರ್ಮಾಣಕ್ಕೆ ಈಗಾಗಲೇ ಕ್ರಮ ವಹಿಸಲಾಗಿದೆಯೇ; (ವಿವರ ನೀಡುವುದು) | ಬೆಳ್ತಂಗಡಿ ತಾಲ್ಲೂಕು ಶಿಕ್ಷಣ ಇಲಾಖೆ ಕಛೇರಿಯ ಕಟ್ಟಡವು ತುಂಬಾ ಶಿಥಿಲಗೊಂಡಿರುವುದರಿಂದ ಅದನ್ನು ದುರಸ್ತಿಪಡಿಸಿದರೂ ಪೂರ್ಣ ಪ್ರಮಾಣದಲ್ಲಿ ಬಳಸಲು ಸಾಧ್ಯವಾಗದೇ ಇರುವ ಸಂಭವ ಇರುವುದರಿಂದ ತಾಲ್ಲೂಕು ಪಂಚಾಯತ್ ಕಚೇರಿಗೆ ಹೊಂದಿಕೊಂಡು ಇರುವ " ಸಾಮರ್ಥ್ಯ ಸೌಧ " ಕಟ್ಟಡಕ್ಕೆ ಸ್ಥಳಾಂತರ ಮಾಡಲು ಕ್ರಮ ಕೈಗೊಳ್ಳುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ರವರು ಬೆಳ್ತಂಗಡಿ ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ದಿನಾಂಕ 23.09.2024ರ ಪತ್ರದಲ್ಲಿ ಸೂಚಿಸಲಾಗಿರುತ್ತದೆ. (ವಿವರವನ್ನು **ಅನುಬಂಧ ದಲ್ಲಿ** ಲಗತ್ತಿಸಿದೆ)<br>ಮುಂದುವರೆದು ಉಪನಿರ್ದೇಶಕರ ಕಛೇರಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ನಿರ್ಮಾಣಕ್ಕೆ ಆಯವ್ಯಯದಲ್ಲಿ ಅನುದಾನ ಲಭ್ಯಗೊಳಿಸದ ಕಾರಣ, ಹಾಗೂ ಸರ್ಕಾರಿ ಕಛೇರಿ ಕಟ್ಟಡಗಳ ನಿರ್ಮಾಣ/ದುರಸ್ತಿಯನ್ನು ಲೋಕೋಪಯೋಗಿ ಇಲಾಖೆಯಿಂದ ನಿರ್ವಹಿಸುವುದರಿಂದ ಇನ್ನು ಮುಂದೆ ಕಛೇರಿ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದ ಪ್ರಸ್ತಾವನೆಯನ್ನು ನೇರವಾಗಿ ಲೋಕೋಪಯೋಗಿ ಇಲಾಖೆಗೆ ಸಲ್ಲಿಸುವಂತೆ ಸರ್ಕಾರದ ಪತ್ರ ಸಂಖ್ಯೆ:ಇಪಿ 226 ಯೋಸಕ 2023 ದಿನಾಂಕ:02.08.2024ರ ಮೂಲಕ ತಿಳಿಸಲಾಗಿರುತ್ತದೆ. |
| ಇ) | ಬೆಳ್ತಂಗಡಿ ತಾಲ್ಲೂಕಿನಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಹಾಗೂ ವ್ಯವಸ್ಥಿತವಾಗಿ ನಡೆಸಲು ಅನುವಾಗುವಂತೆ ಯಾವ ಕಾಲಮಿತಿಯೊಳಗೆ ಸುಸಜ್ಜಿತ ಕಟ್ಟಡ ನಿರ್ಮಾಣವು ಸೇರಿದಂತೆ ಸದರಿ ಕಛೇರಿಗೆ ಬೇಕಾಗಿರುವ ಇತರೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುವುದು | |

**ಇಪಿ 323 ಯೋಸಕ 2024**

**(ಎಸ್.ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**

ಅನುಬಂಧ

19

ಕರ್ನಾಟಕ ಸರ್ಕಾರ

ಸಂಖ್ಯೆ: ಇಪಿ :226 ಯೋಸಕ 2023

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ :02.08.2024

ಇವರಿಂದ :-

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು – 560 001.

ಇವರಿಗೆ :-

ಆಯುಕ್ತರು,
ಶಾಲಾ ಶಿಕ್ಷಣ ಇಲಾಖೆ,
ಬೆಂಗಳೂರು.

ಮಾನ್ಯರೆ,

ವಿಷಯ : ಉಪನಿರ್ದೇಶಕರ ಕಛೇರಿ, ಕಾರವಾರ, ಉತ್ತರ ಕನ್ನಡ ಜಿಲ್ಲೆ ಇಲ್ಲಿಯ ಕಟ್ಟಡ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ : ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಯೋ 6(4)/ಕಾರವಾರ.ಉ.ನಿ.ಕ.ನಿ/2022 868649), ದಿನಾಂಕ:29.12.2023.

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರವನ್ನು ಪರಿಶೀಲಿಸಿದೆ. ಉಪನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ನಿರ್ಮಾಣಕ್ಕೆ ಆಯವ್ಯಯದಲ್ಲಿ ಅನುದಾನ ಲಭ್ಯಗೊಳಿಸದ ಕಾರಣ ಕಛೇರಿ ಕಟ್ಟಡಗಳ ನಿರ್ಮಾಣ/ದುರಸ್ತಿಯನ್ನು ಲೋಕೋಪಯೋಗಿ ಇಲಾಖೆಯಿಂದ ನಿರ್ವಹಿಸುವುದರಿಂದ ಲೋಕೋಪಯೋಗಿ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿ ಕಟ್ಟಡ ನಿರ್ಮಾಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಹಾಗೂ ಇನ್ನೂ ಮುಂದೆ ಉಪನಿರ್ದೇಶಕರ ಕಛೇರಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ನಿರ್ಮಾಣಕ್ಕೆ ಸಂಬಂಧಿಸಿದ ಪ್ರಸ್ತಾವನೆಗಳನ್ನು ನೇರವಾಗಿ ಲೋಕೋಪಯೋಗಿ ಇಲಾಖೆಗೆ ಸಲ್ಲಿಸುವಂತೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

2/8/24

(ಬಿ.ಹೆಚ್. ಗಿರಿಜಾ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ (ಯೋಜನೆ),
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ

ಗ್ರಾಮ ಸ್ವರಾಜ್
ಪಂಚಾಯತ್ ರಾಜ್

## ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು

ಸಂ:ದಕಜಿಪಂ/ಅಭಿವೃದ್ಧಿ/ಇತರ(ಶಿಕ್ಷಣ)/ಸಿಆರ್02/2023-24 ದಿನಾಂಕ: 23-09-2024

ಇವರಿಗೆ,

ಕಾರ್ಯನಿರ್ವಾಹಕ ಅಧಿಕಾರಿ,
ತಾಲ್ಲೂಕು ಪಂಚಾಯತ್,
ಬೆಳ್ತಂಗಡಿ.

ಮಾನ್ಯರೇ,

ವಿಷಯ: ಬೆಳ್ತಂಗಡಿ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಕಟ್ಟಡವನ್ನು "ಸಾಮರ್ಥ್ಯ ಸೌಧ" ಕಟ್ಟಡಕ್ಕೆ ಸ್ಥಳಾಂತರ ಮಾಡಲು ಅನುಮತಿ ಕೋರಿರುವ ಕುರಿತು

ಉಲ್ಲೇಖ:1) ಕ್ಷೇತ್ರ ಶಿಕ್ಷಣಾಧಿಕಾರಿ, ಬೆಳ್ತಂಗಡಿ, ತಾಲ್ಲೂಕುರವರ ಪತ್ರ ಸಂಖ್ಯೆ:
ಸಿ1/ಕ್ಷೇ.ಶಿ.ಕ.ಸ್ಥ.ಕೊ/2024-25 ದಿನಾಂಕ 31.08.2024
2) ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ ಇವರ ಪತ್ರ ಸಂ: ಡಿ1/ಕ್ಷೇ.ಶಿ.ಕಚೇರಿ/ಸ್ಥಳಾಂತರ/45/2024-25 ದಿನಾಂಕ: 01.09.2024

******************

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಬೆಳ್ತಂಗಡಿ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಕಟ್ಟಡವು ತೀರಾ ಶಿಥಿಲಗೊಂಡಿದ್ದು, ಮಳೆಗೆ ಸೋರುತ್ತಿರುವುದರಿಂದ ಕಚೇರಿಯ ಅಮೂಲ್ಯ ದಾಖಲೆ ಪತ್ರಗಳು ಒದ್ದೆಯಾಗಿ ನಾಶವಾಗುವ ಸಂಭವವಿರುವುದರಿಂದ ಹಾಗೂ ಸದರಿ ಕಟ್ಟಡವನ್ನು ದುರಸ್ತಿಪಡಿಸಿದರೂ ಪೂರ್ಣ ಪ್ರಮಾಣದಲ್ಲಿ ಬಳಸಲು ಸಾಧ್ಯವಾಗದೇ ಇರುವ ಸಂಭವ ಇರುವುದರಿಂದ ಕಚೇರಿ ಕಟ್ಟಡವನ್ನು ಬೆಳ್ತಂಗಡಿ ತಾಲ್ಲೂಕು ಪಂಚಾಯತ್ ಕಚೇರಿಗೆ ಹೊಂದಿಕೊಂಡು ಇರುವ "ಸಾಮರ್ಥ್ಯ ಸೌಧ" ಕಟ್ಟಡಕ್ಕೆ ಸ್ಥಳಾಂತರ ಮಾಡಲು ಅನುಮತಿ ದೊರಕಿಸಿಕೊಡುವಂತೆ ಉಲ್ಲೇಖದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಕೋರಿರುತ್ತಾರೆ. ದಿನಾಂಕ 30/08/2024ರಂದು ನಡೆದ ಕೆ.ಡಿ.ಪಿ. ಸಭೆಯಲ್ಲಿ ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ ಇವರು ಸಹ ಈ ಬಗ್ಗೆ ಆಗ್ರಹಿಸಿರುತ್ತಾರೆ. ಆದುದರಿಂದ ಬೆಳ್ತಂಗಡಿ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಕಟ್ಟಡವನ್ನು "ಸಾಮರ್ಥ್ಯ ಸೌಧ" ಕಟ್ಟಡಕ್ಕೆ ಸ್ಥಳಾಂತರ ಮಾಡಲು ಅನುಮತಿ ನೀಡುವಂತೆ ಉಲ್ಲೇಖ(2)ರಲ್ಲಿ ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ ಇವರು ಮನವಿ ಸಲ್ಲಿಸಿರುತ್ತಾರೆ.

ಆದುದರಿಂದ ಈ ಬಗ್ಗೆ ತಮ್ಮ ಹಂತದಲ್ಲಿ ಸೂಕ್ತ ಕ್ರಮ ಕೈಗೊಂಡು ಈ ಕಛೇರಿಗೆ ಕೂಡಲೇ ವರದಿ ನೀಡುವಂತೆ ಈ ಮೂಲಕ ಸೂಚಿಸಿದೆ.

ಕ.ಟಿ.(35)ರಲ್ಲಿ ಮುಕಾನಿಅವರಿಂದ ಅನುಮೋದಿತ

ತಮ್ಮ ವಿಶ್ವಾಸಿ

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಪರವಾಗಿ
ದ.ಕ.ಜಿಲ್ಲಾ ಪಂಚಾಯತ್

ಲಗತ್ತು: ಉಲ್ಲೇಖಿತ ಪತ್ರ

ಸ್ವೀಕರಿಸಿದೆ

ಪ್ರತಿ: ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ ಇವರಿಗೆ ಮಾಹಿತಿಗಾಗಿ